## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಸ್.ಕೆ.ಹೆಗಡೆ, ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) (ಕೆ.ಸಿ.ಎಸ್.ಆರ್ ನಿಯಮ-32 ರಡಿ ಸ್ವತಂತ್ರ ಪ್ರಭಾರದಲ್ಲಿರುವ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ವಿಭಾಗ-2) ಇವರ ವಿರುದ್ದದ ಇಲಾಖೆ ವಿಚಾರಣೆ- ಸಾಬೀತಾದ ಆರೋಪಗಳಿಗೆ ಅನುಗುಣವಾಗಿ ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸುವ ದಂಡನೆ ವಿಧಿಸುವ ಬಗ್ಗೆ-ಆದೇಶ.

**ಓದಲಾಗಿದೆ:**

1. ಅಪರ ನಿಬಂಧಕರು ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಕಂಪ್ಲೇಂಟ್/ ಉಪಲೋಕ್/ಬಿಬಿಎಂ-111/2002/ಎಆರ್‌ಇ-6, ದಿನಾಂಕ: 18.01.2013.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 31 ವೀಸೇಬಿ 2013, ದಿನಾಂಕ: 16.03.2013
3. ಮಾನ್ಯ ಉಪಲೋಕಾಯುಕ್ತರ ಆಪ್ತ ಸಹಾಯಕರ ಪತ್ರ ಸಂಖ್ಯೆ: ಲೋಕ್. ಎ.ಆರ್.ಇ.-5/ಇಎನ್‌ಕ್ಯೂ-198/2013, ದಿನಾಂಕ: 22.01.2015,
4. ಶ್ರೀ ಎಸ್.ಕೆ.ಹೆಗಡೆ ಇವರಿಗೆ ಜಾರಿ ಮಾಡಿದ 2 ನೇ ಕಾರಣ ಕೇಳುವ ನೋಟಿಸ್ ಸಂಖ್ಯೆ: ಗ್ರಾಅಪ 109 ಇಎನ್‌ಕ್ಯೂ 2015, ದಿನಾಂಕ: 04.01.2016.
5. ಶ್ರೀ ಎಸ್.ಕೆ.ಹೆಗಡೆ ಇವರು ವಿವರಣೆ ಸಲ್ಲಿಸಲು ಕಾಲಾವಕಾಶ ಕೋರಿ ಸಲ್ಲಿಸಿದ ಮನವಿ ದಿನಾಂಕ: 29.01.2016.
6. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 109 ಇಎನ್‌ಕ್ಯೂ 2015, ದಿನಾಂಕ: 03.03.2016.

*****

**ಪ್ರಸ್ತಾವನೆ:-**

ಮಾನ್ಯ ಉಪಲೋಕಾಯುಕ್ತ-1 ರವರ ಆಪ್ತ ಸಹಾಯಕರು ಮೇಲೆ ಓದಲಾದ ಕ್ರಮಾಂಕ (3) ರ ದಿನಾಂಕ: 22.1.2015 ರ ಪತ್ರದೊಂದಿಗೆ ವಿಚಾರಣೆ ವರದಿ, ಸಂಬಂಧಿಸಿದ ದಾಖಲೆಗಳು ಹಾಗೂ ವಿಚಾರಣೆ ವರದಿಯ ಕುರಿತು ಮಾನ್ಯ ಉಪಲೋಕಾಯುಕ್ತ-1 ರವರ ಶಿಫಾರಸ್ಸುಗಳನ್ನು ಲಗತ್ತಿಸಿ, ಮುಂದಿನ ಕ್ರಮಕ್ಕಾಗಿ ಸರ್ಕಾರಕ್ಕೆ ಕಳುಹಿಸಿರುತ್ತಾರೆ. ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಪ್ರಕರಣದ ಸಂಕ್ಷಿಪ್ತ ವಿವರಗಳೆಂದರೆ,

ಮಾನ್ಯ ಉಪ ಲೋಕಾಯುಕ್ತ-1 ರವರು ಲೋಕಾಯುಕ್ತ ಕಾಯ್ದೆ ಕಲಂ 12(3)ರ ಅನುಸಾರ ಸರ್ಕಾರಕ್ಕೆ ಮೇಲೆ ಕ್ರಮಸಂಖ್ಯೆ: (1) ರಂತೆ ಸಲ್ಲಿಸಿದ್ದ ದಿನಾಂಕ: 18.01.2013 ರ ವರದಿಯಲ್ಲಿ ಶ್ರೀ ಮಹೇಶ್, ಪಾಲಾ ಗ್ರಾಮ ಪಂಚಾಯತ್, ಮುಂಡಗೋಡ ಇವರು ಲೋಕಾಯುಕ್ತ ಕಛೇರಿಗೆ ಸಲ್ಲಿಸಿದ್ದ ದೂರಿನ ಕುರಿತು ಕೈಗೊಳ್ಳಲಾದ ತನಿಖೆಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ ತಾಲ್ಲೂಕಿನ ವ್ಯಾಪ್ತಿಯಲ್ಲಿ 2004ನೇ ಸಾಲಿನಲ್ಲಿ ಪಾಲಸ್ವಸ್ತಿ ಗ್ರಾಮ ಯೋಜನೆಯಡಿ ಕೈಗೊಳ್ಳಲಾದ ಸಭಾ ಭವನ ನಿರ್ಮಾಣ, ರಸ್ತೆ ಡಾಂಬರೀಕರಣ ಹಾಗೂ ಇತರೆ ವಿವಿಧ ಕಾಮಗಾರಿಗಳ ಅನುಷ್ಠಾನದಲ್ಲಿ ಹಣ ದುರುಪಯೋಗಪಡಿಸಿಕೊಂಡಿರುವ ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗಿವೆ ಎಂದು ತಿಳಿಸಿದ್ದು, ಇದಕ್ಕೆ ಕಾರಣರಾದ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ವಿವರವಾದ ಇಲಾಖೆ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು-1957 ರ ಅನುಸಾರ ಕೈಗೊಳ್ಳುವ ಸಲುವಾಗಿ

ಪ್ರಕರಣವನ್ನು ಸದರಿ ನಿಯಮಗಳ ನಿಯಮ 14-ಎ ರಂತೆ ಮೇಲೆ ಕ್ರಮಸಂಖ್ಯೆ: 2 ರಲ್ಲಿ ಓದಲಾದ ದಿನಾಂಕ: 26.03.2013ರ ಆದೇಶದಲ್ಲಿ ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಲಾಗಿತ್ತು.

1) ಶ್ರೀ ವಿ.ಎಂ.ಹಲಗತ್ತಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಮುಂಡಗೋಡ.
2) ಶ್ರೀ ಎ.ಎಸ್.ಕನ್ನಳ್ಳಿ, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಮುಂಡಗೋಡ.
3) ಶ್ರೀ ಆರ್.ಎನ್.ರಾಠೋಡ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಉಪವಿಭಾಗ, ಮುಂಡಗೋಡ
4) ಶ್ರೀ ಎಸ್.ಕೆ.ಹೆಗಡೆ, ಹಿಂದಿನ ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್ ಮುಂಡಗೋಡ.

ಮೇಲೆ ತಿಳಿಸಿರುವ ಆಪಾದಿತರುಗಳ ವಿರುದ್ಧದ ಆರೋಪಗಳ ಬಗ್ಗೆ ಲೋಕಾಯುಕ್ತ ಕಛೇರಿಯ ಅಪರ ನಿಬಂಧಕರು, ವಿಚಾರಣೆಗಳು-5 ಇವರು ವಿವರವಾದ ಇಲಾಖಾ ವಿಚಾರಣೆಯನ್ನು ಕೈಗೊಂಡಿದ್ದು, ಇಲಾಖಾ ವಿಚಾರಣೆಯಲ್ಲಿ ಆಪಾದಿತರುಗಳ ವಿರುದ್ಧದ ಆರೋಪಗಳು ಸಾಬೀತಾಗಿರುತ್ತವೆ.

ಮಾನ್ಯ ಉಪಲೋಕಾಯುಕ್ತರವರು ವಿಚಾರಣಾ ವರದಿಯನ್ನು ಪರಿಶೀಲಿಸಿ ವಿಚಾರಣಾ ವರದಿಗೆ ಸಹಮತಿ ವ್ಯಕ್ತಪಡಿಸಿ ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರುಗಳ ವಿರುದ್ಧದ ಆರೋಪಗಳು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿರುವ ಕಾರಣ ಸಾಬೀತಾದ ಆರೋಪಗಳ ಗಂಭೀರತೆಗೆ ಅನುಗುಣವಾಗಿ ದಂಡನೆಯನ್ನು ವಿಧಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ವಿಚಾರಣಾ ವರದಿ, ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿದ್ದು, ಈ ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರುಗಳು ಬೇರೆ ಬೇರೆ ಇಲಾಖೆಯ ಸೇವೆಗಳಿಗೆ ಸೇರಿದವರಾದ್ದರಿಂದ ಅಂದರೆ ಶ್ರೀ ವಿ.ಎಂ.ಹಲಗತ್ತಿ, ಉಪ ಅರಣ್ಯ ಸಂರಕ್ಷಣಾಧಿಕಾರಿ, ಇವರು ಅರಣ್ಯ ಇಲಾಖೆ ಶ್ರೀ ಎಸ್.ಕನ್ನಳ್ಳಿ, ಹಿಂದಿನ ಕಿರಿಯ ಇಂಜಿನಿಯರ್ ಮತ್ತು ಶ್ರೀ ಆರ್.ಎನ್.ರಾಥೋಡ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರುಗಳು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಾದ ಕಾರಣ ಸದರಿಯವರಿಗೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳಲು ಕೋರಿ ವಿಚಾರಣಾ ವರದಿ ಹಾಗೂ ಇತರೆ ದಾಖಲೆಗಳೊಂದಿಗೆ ಪ್ರಸ್ತಾವನೆಯನ್ನು ಸಂಬಂಧಿಸಿದ ಇಲಾಖೆಗಳಿಗೆ ಕಳುಹಿಸಲಾಗಿದೆ.

ಶ್ರೀ ಎಸ್.ಕೆ.ಹೆಗಡೆ, ಇವರು ಮೂಲತಃ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿನ ಕಾರವಾರ ಜಿಲ್ಲಾ ಪಂಚಾಯಿತಿಯ ನೌಕರರಾಗಿದ್ದ ಕಾರಣ ಇವರಿಗೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕ್ರಮವಹಿಸಲಾಗಿದೆ. ಸದರಿಯವರು ಮೂಲತಃ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ವೃಂದದ ನೌಕರರಾಗಿದ್ದು, ಸದರಿಯವರಿಗೆ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 279 ಸೇಶಿಕಾ 2010 ದಿನಾಂಕ: 23.12.2011 ರಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 32 ರಡಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ವೃಂದಕ್ಕೆ ಸ್ವತಂತ್ರ ಪ್ರಭಾರದಲ್ಲಿರಿಸಲಾಗಿದ್ದು, ಸದರಿಯವರು ಹಾಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ತೀರ್ಥಹಳ್ಳಿ, ಇಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ.

ಸರ್ಕಾರವು ವಿಚಾರಣಾ ವರದಿಯನ್ನು ಅನುಸರಿಸಿ ಕ್ರಮ ಕೈಗೊಳ್ಳುವ ಮೊದಲು ಸದರಿ ಅಧಿಕಾರಿಗೆ ಮೇಲೆ ಕ್ರಮಸಂಖ್ಯೆ: 4 ರಲ್ಲಿ ಓದಲಾದಂತೆ 2ನೇ ಕಾರಣ ಕೇಳುವ ನೋಟೀಸ್‌ನೊಂದಿಗೆ ವಿಚಾರಣಾ ವರದಿ ಹಾಗೂ ಮಾನ್ಯ ಉಪ ಲೋಕಾಯುಕ್ತ ರವರ ಶಿಫಾರಸ್ಸಿನ ಪತ್ರಗಳನ್ನು ಕಳುಹಿಸಲಾಗಿತ್ತು. ಪ್ರತಿಯಾಗಿ ಸದರಿಯವರು ಈ ಕುರಿತು ಸರ್ಕಾರಕ್ಕೆ ದಿನಾಂಕ: 29.01.2016 ರಂದು ಸಲ್ಲಿಸಿದ ಮನವಿಯಲ್ಲಿ ವಿವರಣೆ ಸಲ್ಲಿಸಲು ಏಪ್ರಿಲ್-2016ರ ವರೆಗೆ ಅವಕಾಶ ನೀಡಬೇಕೆಂದು ಕೋರಿದ್ದರು.

ಆದರೆ ಸದರಿ ಅವಧಿಯಲ್ಲಿ ಶ್ರೀ ಎಸ್.ಕೆ.ಹೆಗಡೆ ಇವರು ಸರ್ಕಾರಕ್ಕೆ ಯಾವುದೇ ವಿವರಣೆಯನ್ನು ಸಲ್ಲಿಸಿರುವುದಿಲ್ಲ. ಹಾಗಾಗಿ ಸದರಿಯವರ ವಿವರಣೆ ಏನೂ ಇಲ್ಲವೆಂದು ಪರಿಗಣಿಸಿ ನಿಯಮಾನುಸಾರ ಕ್ರಮವಹಿಸಲಾಗಿದೆ.

ಪ್ರಕರಣದಲ್ಲಿ ಶ್ರೀ ಎಸ್.ಕೆ.ಹೆಗಡೆ, ಹಿಂದಿನ ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯುತ್, ಮುಂಡಗೋಡ ಮತ್ತು ಇತರರ ವಿರುದ್ಧ ಮಾಡಲಾಗಿರುವ ಆರೋಪದಲ್ಲಿ 2004ನೇ ಸಾಲಿನಲ್ಲಿ ಮುಂಡಗೋಡ ತಾಲ್ಲೂಕಿನಲ್ಲಿ ಪಾಲಸ್ವಸ್ಥಿ ಗ್ರಾಮ ಯೋಜನೆಯಲ್ಲಿ ಸರ್ಕಾರದಿಂದ ಹಂಚಿಕೆಯಾದ 20-25 ಲಕ್ಷ ರೂ.ಗಳ ಅನುದಾನದಲ್ಲಿ ಸಭಾ ಭವನ ನಿರ್ಮಾಣ, ರಸ್ತೆ ಡಾಂಬರೀಕರಣ, Surface Reservoir Sanitation, ಸೋಲಾರ್ ವಾಟರ್ ಹೀಟರ್, ಹಳ್ಳ ಅಭಿವೃದ್ಧಿ, ಆರ್.ವಿ.ಡಿ. ಪ್ರಾಣಿ ಪ್ರಯೋಗಾಲಯ ಬಲವರ್ಧೀಕರಣ, ಶಾಲಾ ಕಟ್ಟಡಗಳ ದುರಸ್ತಿ, ಅಂಗನವಾಡಿ ಕಟ್ಟಡಗಳಿಗೆ ಶೌಚಾಲಯ ನಿರ್ಮಾಣ ಇತ್ಯಾದಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದೂ, ಸದರಿ ಕಾಮಗಾರಿಗಳ ಪೈಕಿ ಬಲದಂಡೆ ಕಾಲುವೆಯಿಂದ ನಿರ್ಮಿಸಿದ 200 ಮೀ. ಫೀಡರ್ ಕೆನಾಲ್ ಕಾಮಗಾರಿಯಲ್ಲಿ ನಿರ್ದಿಷ್ಟಪಡಿಸಿದ ಅಂದಾಜಿಗಿಂತ ಕಡಿಮೆ ಪ್ರಮಾಣದ ಸಿಮೆಂಟ್ ಬಳಸಿ ರೂ.6,140/-ಗಳ ನಷ್ಟ ಉಂಟು ಮಾಡಿರುತ್ತಾರೆಂದೂ, ನಾಲ್ಕು ಗಟ್ಟರ್‌ಗಳ ನಿರ್ಮಾಣದಲ್ಲಿ ನಿಗದಿತ ಪ್ರಮಾಣಾನುಸಾರ ಸಿಮೆಂಟ್ ಬಳಸದೇ ಇರುವುದರಿಂದ ಸರ್ಕಾರಕ್ಕೆ ರೂ.52,136/-ಗಳ ಆರ್ಥಿಕ ನಷ್ಟ ಉಂಟು ಮಾಡಿರುತ್ತಾರೆಂಬ ಆರೋಪಗಳನ್ನು ಮಾಡಲಾಗಿದೆ.

ಆಪಾದಿತರ ವಿರುದ್ಧದ ಆರೋಪಗಳ ಬಗ್ಗೆ ವಿಚಾರಣಾಧಿಕಾರಿ ರವರು ಇಲಾಖಾ ವಿಚಾರಣೆ ಸಂದರ್ಭದಲ್ಲಿ ಶಿಸ್ತು ಪ್ರಾಧಿಕಾರದ ಪರವಾಗಿ 4 ಸಾಕ್ಷಿಗಳು ಹಾಗೂ ಹಲವಾರು ದಾಖಲೆಗಳನ್ನು ಪರಿಗಣಿಸಿರುತ್ತಾರೆ. ಸದರಿ ದಾಖಲೆಗಳು ಮತ್ತು ಸಾಕ್ಷಿಗಳ ಪರಿಗಣನೆಯ ನಂತರ ಪ್ರಕರಣದಲ್ಲಿ ಭಾಗಿಯಾಗಿರುವ ಎಲ್ಲಾ 4 ಜನ ಆಪಾದಿತರುಗಳ ವಿರುದ್ಧದ ಆರೋಪಗಳು ಸಾಬೀತಾಗಿವೆ ಎಂದು ಅಭಿಪ್ರಾಯಪಟ್ಟಿರುತ್ತಾರೆ. ಶ್ರೀ ಎಸ್.ಕೆ.ಹೆಗಡೆ ಇವರು ವಿಚಾರಣಾ ವರದಿಗೆ ಪ್ರತಿಯಾಗಿ ಯಾವುದೇ ವಿವರಣೆಯನ್ನು ಸಲ್ಲಿಸಿರುವುದಿಲ್ಲ. ಆದಾಗ್ಯೂ ಸದರಿಯವರು ಈ ಹಿಂದೆ ವಿಚಾರಣಾಧಿಕಾರಿ ಗಳಿಗೆ ಸಲ್ಲಿಸಿದ ಲಿಖಿತ ಹೇಳಿಕೆಯಲ್ಲಿನ ಅಂಶಗಳನ್ನು ಪರಿಗಣಿಸಲಾಗಿದೆ. ಈಗಾಗಲೇ ಸದರಿ ಅಂಶಗಳ ಕುರಿತು ವಿಚಾರಣಾಧಿಕಾರಿ ರವರು ಪರಿಗಣಿಸಿ ಆರೋಪಗಳ ಕುರಿತು ನಿರ್ಣಯಿಸಿರುವುದರಿಂದ ಮತ್ತೊಮ್ಮೆ ಸದರಿ ಅಂಶಗಳ ಕುರಿತು ಉಲ್ಲೇಖಿಸಲಾಗಿಲ್ಲ.

ಶ್ರೀ ಎಸ್.ಕೆ.ಹೆಗಡೆ ಮತ್ತು ಇನ್ನೊಬ್ಬ ಆಪಾದಿತರಾದ ಶ್ರೀ ವಿ.ಎಂ.ಹಲಗತ್ತಿ ಇವರು 4 ಗಟ್ಟರ್‌ಗಳ ನಿರ್ಮಾಣ ಕಾಮಗಾರಿಗಳಲ್ಲಿ ನಿರ್ದಿಷ್ಟಪಡಿಸಿದ ಪ್ರಮಾಣಕ್ಕಿಂತ ಕಡಿಮೆ ಪ್ರಮಾಣದ ಸಿಮೆಂಟ್ ಅನ್ನು ಬಳಸಿ ಸರ್ಕಾರಕ್ಕೆ ಒಟ್ಟಾರೆ ರೂ.52,136/-ಗಳ ಆರ್ಥಿಕ ನಷ್ಟ ಉಂಟು ಮಾಡಿದ್ದಾರೆಂಬ ಆರೋಪವು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿರುತ್ತದೆ. ಹಾಗಾಗಿ ಸದರಿಯವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯದಲ್ಲಿ ಪೂರ್ಣ ಪ್ರಮಾಣದ ನಿಷ್ಠೆ ಮತ್ತು ಜವಾಬ್ದಾರಿಯನ್ನು ಪ್ರದರ್ಶಿಸದೇ ದುರ್ನಡತೆ ಎಸಗಿರುವುದು ಸ್ಪಷ್ಟವಾಗಿರುತ್ತದೆ.

ಮೇಲಿನ ಎಲ್ಲಾ ಅಂಶಗಳ ಪರಿಶೀಲನೆಯ ನಂತರ ಸರ್ಕಾರವು ಶ್ರೀ ಎಸ್.ಕೆ.ಹೆಗಡೆ, ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ನಿಯಮ 32 ರಡಿ ಸ್ವತಂತ್ರ ಪ್ರಭಾರದಲ್ಲಿರುವ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧದ ಸಾಬೀತಾದ ಆರೋಪಗಳ ಗಂಭೀರತೆಗೆ ಅನುಗುಣವಾಗಿ ದಂಡನೆಯನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 109 ಇಎನ್‌ಕ್ಯೂ 15,</u>**
**<u>ಬೆಂಗಳೂರು, ದಿನಾಂಕ: 26.05.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಎಸ್.ಕೆ. ಹೆಗಡೆ, ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ), ಕೆ.ಸಿ.ಎಸ್.ಆರ್. ನಿಯಮ 32 ರಡಿ ಸ್ವತಂತ್ರ ಪ್ರಭಾರದಲ್ಲಿರುವ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಇವರ ವಿರುದ್ಧದ ಸಾಬೀತಾದ ಆರೋಪಗಳ ಗಂಭೀರತೆಗೆ

ಅನುಗುಣವಾಗಿ ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 8(vi) ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಸುವ ದಂಡನೆಯನ್ನು ವಿಧಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

26/05/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಇವರಿಗೆ:</u>
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಮೈಸೂರು ರಸ್ತೆ, ಬೆಂಗಳೂರು.

ಪ್ರತಿ:

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರಕನ್ನಡ
5. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
6. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ರವರ ಮುಖಾಂತರ)
7. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
8. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ /ಉಪ ಕಾರ್ಯದರ್ಶಿ(ಅ) / ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
9. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.